# ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ. ಹಿರೇಕೆರೂರು.

## ಸಿ.ಸಿ.ನಂಬರ್ಃ 297/2018

ಸಿಡಬ್ಲ್ಯೂಃ 4

ಪಿಡಬ್ಲ್ಯೂಃ 2

| | | |
|---|---|---|
| ಸಾಕ್ಷಿಯ ಹೆಸರು | : | ಶಿವರಾಜ ದ್ಯಾವಕ್ಕಳವರ |
| ತಂದೆಯ ಹೆಸರು | : | ಈರಪ್ಪ |
| ವಯಸ್ಸು | : | 42 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ರಟ್ಟೀಹಳ್ಳಿ |

ಇಂದು ದಿನಾಂಕಃ 23.08.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ** ಮಾನ್ಯ ಎಪಿಪಿಯವರಿಂದಃ

1. ಸಾಕ್ಷಿಯು ಘಟನಾ ಜಾಗದ ಪಂಚನಾಮೆಯಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಘಟನಾ ಜಾಗದ ಪಂಚನಾಮೆಯನ್ನು ನಿಪಿ-9 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 3-4 ವರ್ಷಗಳ ಹಿಂದೆ ರಟ್ಟೀಹಳ್ಳಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನ ಜೊತೆ ಯಾರೂ ಇರಲಿಲ್ಲ. ನಿಪಿ-9 ರಲ್ಲಿರುವ ವಿಷಯಗಳು ನನಗೆ ಗೊತ್ತಿಲ್ಲ. ನಿಪಿ-2 ರ ಫೋಟೋದಲ್ಲಿ ತಾನು ಇರುವುದನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

2. ನಿಪಿ-2 ನ್ನು ಠಾಣೆಯ ಮುಂದೆ ತೆಗೆದಿರುತ್ತಾರೆ. ನಿಪಿ-2 ನ್ನು ಯಾವ ಉದ್ದೇಶಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ವಾಹನ ಜಪ್ತು ಪಂಚನಾಮೆ ಮೇಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ವಾಹನ ಜಪ್ತು ಪಂಚನಾಮೆಯನ್ನು ನಿಪಿ-10 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಅದೇ ದಿನ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ-10 ರ ಕಾಲಕ್ಕೆ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿಲ್ಲ. ನಿಪಿ-10 ರಲ್ಲಿರುವ ವಿಷಯಗಳು ನನಗೆ ಗೊತ್ತಿಲ್ಲ. ಅಭಿಯೋಜನೆ ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 65 ಬಿ ಅಡಿಯಲ್ಲಿ ದೃಢೀಕರಣ ಪತ್ರ ಸಲ್ಲಿಸಿದ್ದು, ಸದರಿ ಪತ್ರವನ್ನು ನಿಪಿ-11 ಎಂದು ಗುರುತಿಸಲಾಯಿತು.

3. ಸಾಕ್ಷಿಗೆ 2 ಫೋಟೋಗಳನ್ನು ತೋರಿಸಲಾಗಿ, ಸದರಿ ಫೋಟೋಗಳಲ್ಲಿ ತಾವು ಇರುವುದನ್ನು ಗುರುತಿಸಿರುತ್ತಾರೆ. ಸದರಿ ಫೋಟೋಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು. ನಿಪಿ-12 ಮತ್ತು 13 ಗಳನ್ನು ಪೊಲೀಸ್ ಠಾಣೆಯಲ್ಲಿ ತೆಗೆದಿರುತ್ತಾರೆ. ನಿಪಿ-12 ಮತ್ತು 13 ರಲ್ಲಿರುವ ಕಾರ ಮತ್ತು ಆಟೋವನ್ನು ಇರುವುದನ್ನು ಗುರುತಿಸಿರುತ್ತಾರೆ. ನಿಪಿ-12 ಮತ್ತು 13 ಗಳನ್ನು ಯಾವ ಉದ್ದೇಶಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>** ಮಾನ್ಯ ಎಪಿಪಿಯವರಿಂದಃ

1. ದಿನಾಂಕಃ 21.02.2018 ರಂದು ನನ್ನನ್ನು ಮತ್ತು ಚಾಸಾ-5 ರವರನ್ನು ಅಪಘಾತ ಸ್ಥಳಕ್ಕೆ ಕರೆಸಿದ್ದರು ಎಂದರೆ ಸರಿಯಲ್ಲ. ಅಲ್ಲಿ ಚಾಸಾ-1 ರವರು ತೋರಿಸಿದ ಜಾಗದಲ್ಲಿ ಪೊಲೀಸರು ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ನಿಪಿ-9 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಲ್ಲಿರುವ ರಸ್ತೆ ರಾಣೆಬೆನ್ನೂರಿನಿಂದ ರಟ್ಟೀಹಳ್ಳಿಗೆ ಹೋಗುವ ರಸ್ತೆ ಎಂದರೆ ಸರಿ. ಸದರಿ ರಸ್ತೆಯಲ್ಲಿ ಪೊಲೀಸರು ನಿಪಿ-2 ನ್ನು ತೆಗೆದಿರುತ್ತಾರೆ ಎಂದರೆ ಸರಿ.

2. ದಿನಾಂಕಃ 21.02.2018 ರಂದು ನನ್ನನ್ನು ಮತ್ತು ಚಾಸಾ-5 ರವರನ್ನು ರಟ್ಟೀಹಳ್ಳಿ ಪೊಲೀಸ್ ಠಾಣೆಗೆ ಕರೆಸಿದ್ದರು ಎಂದರೆ ಸರಿ. ಚಾಸಾ-1 ರವರು ವಾಹನವನ್ನು ತೋರಿಸಿ, ಆ ಬಗ್ಗೆ ಪಂಚನಾಮೆ ಮಾಡಲು ಕೇಳಿದರು ಎಂದರೆ ಸರಿಯಲ್ಲ. ಅಲ್ಲಿ ಅಪಘಾತಕ್ಕೀಡಾದ ಕಾರ ನಂಬರಃ ಕೆಎ-27/ಎಮ್-8558 ಮತ್ತು ಹಳದಿ ಆಟೋ ನಂಬರಃ ಕೆಎ-27/ಬಿ-2155 ಗಳು ಜಖಂ ಗೊಂಡಿರುವುದನ್ನು ತೋರಿಸಿ, ಇವೆ ಅಪಘಾತಕ್ಕೆ ಒಳಗಾದ ವಾಹನಗಳು ಎಂದು ಹೇಳಿ, ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ಸದರಿ ವಾಹನಗಳನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ನಿಪಿ-12 ಮತ್ತು 13 ಗಳನ್ನು ತೆಗೆದಿರುತ್ತಾರೆ ಎಂದರೆ ಸರಿ. ನನಗೆ ಎಲ್ಲ ವಿಷಯಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ. ಎಸ್.ಹೆಚ್.ಪಿ. ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.